ಕರ್ನಾಟಕ ಸರ್ಕಾರ

# ರಾಷ್ಟ್ರೀಯ ಆರೋಗ್ಯ ಅಭಿಯಾನ

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಕೊಪ್ಪಳ. (ಪಿನ್: 583231) ದೂ.ಸಂ: 08539-221811

ಸಂಖ್ಯೆ : ಡಿಹೆಚ್ಎಸ್/ಐ.ಡಿ.ಎಸ್.ಪಿ/ಕೊ / 438 /ಎನ್‌ಹೆಚ್ಎಂ/2025-26

ಜಿಲ್ಲಾ ಸರ್ವೇಕ್ಷಣಾ ಘಟಕ, ಕೊಪ್ಪಳ
ದಿನಾಂಕ:28-11-2025

## :: ಗುತ್ತಿಗೆ ನೇಮಕಾತಿ ಅಧಿಸೂಚನೆ ::

ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯ ಜಿಲ್ಲಾ ಸರ್ವೇಕ್ಷಣಾ ಘಟಕದ IDSP ಕಾರ್ಯಕ್ರಮದಡಿಯಲ್ಲಿನ ಗುತ್ತಿಗೆ ಆಧಾರದ ಮೇಲೆ ಬ್ಲಾಕ್ ಎಪಿಡೆಮಿಯೋಲಾಜಿಸ್ಟ್ ಹುದ್ದೆಯನ್ನು ದಿ:13-12-2025 ರವರೆಗೆ ಹಾಗೂ ನವೀಕರಣದ ಷರತ್ತುಗಳನ್ನೊಳಗೊಂಡಂತೆ ಎನ್.ಹೆಚ್.ಎಂ ನಿಯಮಾವಳಿ ಹಾಗೂ ಕಲ್ಯಾಣ ಕರ್ನಾಟಕ 371ಜೆ ಅಭ್ಯರ್ಥಿಗಳಿಗೆ ಮೆರಿಟ್ ಮತ್ತು ರೋಸ್ಟರ್ ಆಧಾರದ ಮೇಲೆ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಅಹ್ವಾನಿಸಿದೆ.

| ಕ್ರ.ಸ | ಹುದ್ದೆಯ ಹೆಸರು/ಸ್ಥಳ | ಸಂಖ್ಯೆ | ವಿದ್ಯಾರ್ಹತೆ | ವಯೋಮಿತಿ | ಮೀಸಲಾತಿ | ವೇತನ |
|---|---|---|---|---|---|---|
| 1 | ಬ್ಲಾಕ್ ಎಪಿಡೆಮಿಯೋಲಾಜಿಸ್ಟ್/ ಬಿ.ಪಿ.ಹೆಚ್.ಯು ಗಂಗಾವತಿ. | 01 | Medical Graduate with post graduate degree/Diploma in preventive and social medicine/Public health or Epidemiology (Such as MD, MPH, DPH, MAE etc)<br>Or<br>Any AYUSH/Dental Sciences Graduate with MPH(Masters in Public Health)with 1year experience in Public Health<br>Or<br>MSc (Epidemiology) with two Years experience in public health/(Desirable)<br>Or<br>B.Sc. in Life Sciences (Nursing/Biology/Moicrobiolgy/Developmental Biology and Physiology)/BDS/BPT with<br><br>i) Masters of Public Health(MPH-Epidemiology)/Diploma in Public Health (DPH- Epidemiology) along with 1 year experience in Public Health,<br>Or<br>ii) Masters in Applied Epidemiology (MAE) from recognized University of India along with two Years experience in public health.<br>Or<br>iii)PhD in Clinical Sciences/Medical Sc/Preventive Medicine/Human Physiology/Pathophysiology/Epidemiology | 40 ವರ್ಷ | ಎಸ್.ಸಿ ಎ- (ಕಲ್ಯಾಣ ಕರ್ನಾಟಕ-371ಜೆ) | 30,000/- |

ಸದರಿ ಮೇಲ್ಕಾಣಿಸಿದ ಹುದ್ದೆಯ ನೇಮಕಾತಿಗೆ ಸಂಬಂಧಿಸಿದ ಪೂರ್ಣ ಪ್ರಮಾಣದ ಹಕ್ಕನ್ನು ಜಿಲ್ಲಾ ಆಯ್ಕೆ ಸಮಿತಿ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘವು ಕಾಯ್ದಿರಿಸಿಕೊಂಡಿದೆ. ಆಯ್ಕೆಯನ್ನು ಮೆರಿಟ್ ಕಮ್ ರೋಸ್ಟರ್ ಆಧಾರದ ಮೇಲೆ ನೇಮಕಾತಿ

**ಸಂಖ್ಯೆ : ಡಿಹೆಚ್‌ಎಸ್/ಐ.ಡಿ.ಎಸ್.ಪಿ/ಕೊ / /ಎನ್‌ಹೆಚ್‌ಎಂ/2025-26** **ಜಿಲ್ಲಾ ಸರ್ವೇಕ್ಷಣಾ ಘಟಕ, ಕೊಪ್ಪಳ**

ಮಾಡಲಾಗುವುದು. ಅರ್ಹ ಅಭ್ಯರ್ಥಿಗಳು ದಿನಾಂಕ:29-11-2025ರಿಂದ ದಿನಾಂಕ:13-12-2025ರವರೆಗೆ ಕೊಪ್ಪಳ ಜಿಲ್ಲಾ ವೆಬ್ ತಾಣ www.koppal.nic.in ನ ಮೂಲಕ ಅರ್ಜಿಯನ್ನು ಸಲ್ಲಿಸಬೇಕು. ಯಾವುದೇ ಕಾರಣಕ್ಕೂ ಆಫ್‌ಲೈನ್ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ.

**ಹೆಚ್ಚಿನ ಮಾಹಿತಿಗಾಗಿ ಸದರಿ ವೆಬ್‌ಸೈಟ್‌ನಲ್ಲಿ ನೀಡಿರುವ ನೇಮಕಾತಿ ಅಧಿಸೂಚನೆಯನ್ನು ಓದಿಕೊಳ್ಳತಕ್ಕದ್ದು.** ಕಛೇರಿಯ ಸಮಯದಲ್ಲಿ ದೂರವಾಣಿಗೆ ಸಂಖ್ಯೆ 08539-225119ಗೆ ಸಂಪರ್ಕಿಸಬಹುದಾಗಿದೆ.

ಉಪಾಧ್ಯಕ್ಷರು
ಜಿಲ್ಲಾ ಆರೋಗ್ಯ ಮತ್ತು ಕುಟುಂಬ
ಕಲ್ಯಾಣ ಸಂಘ ಕೊಪ್ಪಳ

ಕರ್ನಾಟಕ ಸರ್ಕಾರ

# ರಾಷ್ಟ್ರೀಯ ಆರೋಗ್ಯ ಅಭಿಯಾನ

## ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಕೊಪ್ಪಳ. (ಪಿನ್: 583231)

ದೂ.ಸಂ: 08539-221660

ಸಂಖ್ಯೆ : ಡಿಹೆಚ್ಎಸ್/ಜಿ.ಸ.ಘ/ಕೊ 634 /ಎನ್‌ಹೆಚ್ಎಂ/2025-26 ದಿನಾಂಕ:29.11.2025

### :: ಗುತ್ತಿಗೆ ನೇಮಕಾತಿ ಅಧಿಸೂಚನೆ ::

ಎನ್.ಹೆಚ್.ಎಂ. ಯೋಜನೆಯಡಿಯ ಐ.ಡಿ.ಎಸ್.ಪಿ ಕಾರ್ಯಕ್ರಮದಡಿಯಲ್ಲಿನ ಜಿಲ್ಲಾ ಸರ್ವೇಕ್ಷಣಾ ಘಟಕ ಕೊಪ್ಪಳ ಜಿಲ್ಲೆಯಲ್ಲಿ ಗುತ್ತಿಗೆ ಆಧಾರದ ಖಾಲಿ ಇರುವ ಬ್ಲಾಕ್ ಎಪಿಡೆಮಿಯೋಲಾಜಿಸ್ಟ್ ಹುದ್ದೆಯನ್ನು ದಿನಾಂಕ:29-11-2025 ರಿಂದ 13-12-2025 ರವರೆಗೆ ನವೀಕರಣದ ಷರತ್ತುಗಳನ್ನೊಳಗೊಂಡಂತೆ ಎನ್.ಹೆಚ್.ಎಂ ನಿಯಮಾವಳಿ ಹಾಗೂ ಕಲ್ಯಾಣ ಕರ್ನಾಟಕ 371ಜೆ ಅಭ್ಯಥಿಗಳಿಗೆ ಮೆರಿಟ್ ಹಾಗೂ ರೋಸ್ಟರ್ ಆಧಾರದ ಮೇಲೆ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಅಹ್ವಾನಿಸಿರುವ ಬಗ್ಗೆ.

1) ಬ್ಲಾಕ್ ಎಪಿಡೆಮಿಯೋಲಾಜಿಸ್ಟ್:-

**1) ವೇತನ- ರೂ 30,000/- (As per the state NHM norms & HR Policy)**
**2) ಹುದ್ದೆಗಳ ಸಂಖ್ಯೆ -01**
**3) ವಯಸ್ಸಿನ ಮೀತಿ:- 40 ವರ್ಷಗಳು**
**4) ಕಾರ್ಯ ಸ್ಥಳ: ಬಿ.ಪಿ.ಹೆಚ್.ಯು ಗಂಗಾವತಿ**

**3)ವಿದ್ಯಾರ್ಹತೆ:-**

Medical Graduate with post graduate degree/Diploma in preventive and social medicine/Public health or Epidemiology (Such as MD, MPH, DPH, MAE etc)

Or

Any AYUSH/Dental Sciences Graduate with MPH(Masters in Public Health)with 1year experience in Public Health

Or

MSc (Epidemiology) with two Years experience in public health/(Desirable)

Or

B.Sc. in Life Sciences (Nursing/Biology/Moicrobiolgy/Developmental Biology and Physiology)/BDS/BPT with

i) Masters of Public Health(MPH-Epidemiology)/Diploma in Public Health (DPH-Epidemiology) along with 1 year experience in Public Health,

Or

ii) Masters in Applied Epidemiology (MAE) from recognized University of India along with two Years experience in public health.

Or

iii)PhD in Clinical Sciences/Medical Sc/Preventive Medicine/Human Physiology/Pathophysiology/Epidemiology.

:ಸಾಮಾನ್ಯ ಸೂಚನೆಗಳು:

- **ಹುದ್ದೆಗಳ ಸಂಖ್ಯೆಗಳನ್ನು ಹೆಚ್ಚಿಸುವ ಅಥವಾ ಕಡಿತಗೊಳಿಸುವ ಅಧಿಕಾರಿವನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘವು ಹೊಂದಿರುತ್ತದೆ.**
    - ಎನ್.ಹೆಚ್.ಎಂ ಯೋಜನೆಯಡಿಯಲ್ಲಿ ಖಾಲಿ ಇರುವ ಈ ಮೇಲಿನ ಹುದ್ದೆಗೆ ಅರ್ಜಿ ಸಲ್ಲಿಸುವ ಸಂಬಂಧ ನೇಮಕಾತಿ ಪ್ರಕ್ರಿಯೆಯ ಪೂರ್ಣ ವಿವರವನ್ನು www.koppal.nic.in ಈ ಜಾಲತಾಣದಲ್ಲಿ ಲಭ್ಯವಿದ್ದು ಅಭ್ಯರ್ಥಿಗಳು ಕಡ್ಡಾಯವಾಗಿ ಆನ್‌ಲೈನ್ ಮೂಲಕ ಮಾತ್ರ ಅರ್ಜಿ ಸಲ್ಲಿಸತಕ್ಕದ್ದು.
    - ಅಭ್ಯರ್ಥಿಗಳು ಭಾರತೀಯ ನಾಗರಿಕನಾಗಿರತಕ್ಕದ್ದು.
    - ನೇಮಕಾತಿ ಅರ್ಜಿಗಳನ್ನು ಖುದ್ದಾಗಿ / ಅಂಚೆ / ಕೋರಿಯರ್ ಮೂಲಕ ಸಲ್ಲಿಸಲು ಅವಕಾಶವಿರುವುದಿಲ್ಲ. ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
    - ಅಭ್ಯರ್ಥಿಗಳು ಎಲ್ಲಾ ದಾಖಲೆಗಳನ್ನು ಸ್ಪಷ್ಟವಾಗಿ ಕಾಣುವಂತೆ ಆನ್‌ಲೈನ್ ಮೂಲಕ ಅಪ್‌ಲೋಡ್ ಮಾಡುವುದು ಕಡ್ಡಾಯವಾಗಿರುತ್ತದೆ, ಆನ್‌ಲೈನ್ ಮೂಲಕ ಸಲ್ಲಿಸುವ ಅರ್ಜಿಗಳಲ್ಲಿ ಅಪೂರ್ಣ ಹಾಗೂ ಅಸ್ಪಷ್ಟ ದಾಖಲೆಗಳನ್ನು ಅಥವಾ ಮಾಹಿತಿಗಳನ್ನು ನೀಡಿದ್ದಲ್ಲಿ, ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
    - ಈ ನೇಮಕಾತಿ ಸಂಬಂಧ ಅಭ್ಯರ್ಥಿಗಳು ಸ್ಪಷ್ಟಿಕರಣ, ಪ್ರಶ್ನೋತ್ತರಗಳು, ತಕರಾರು ಇತ್ಯಾದಿಗಳಿಗೆ ಪತ್ರ/ಇ-ಮೇಲ್ ವ್ಯವಹಾರಗಳಿಗೆ ಯಾವುದೇ ಅವಕಾಶವಿರುವುದಿಲ್ಲ.

    ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಪ್ರಾರಂಭಿಕ ದಿನಾಂಕ:29-11-2025
    ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:-13-12-2025

    - ಅರ್ಜಿಗಳನ್ನು ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ನೇಮಕಾತಿ ಪ್ರಕಟಣೆಯಲ್ಲಿ ಹುದ್ದೆಯ ಮುಂದೆ ಸೂಚಿಸಿರುವ ಕನಿಷ್ಠ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಕಡ್ಡಾಯವಾಗಿ ಹೊಂದಿರಲೇಬೇಕು. ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಹೊರತುಪಡಿಸಿ, ಇತರೆ ಯಾವುದೇ ಸಮಾನಾಂತರ ವಿದ್ಯಾರ್ಹತೆಯನ್ನು ಪರಿಗಣಿಸಲಾಗುವುದಿಲ್ಲ.
    - ಕನ್ನಡ ಭಾಷಾ ಜ್ಞಾನ ಓದುವುದು, ಬರೆಯುವುದು ಮತ್ತು ಮಾತನಾಡುವುದು ಕಡ್ಡಾಯವಾಗಿರುತ್ತದೆ.
    - ಅರ್ಜಿಯಲ್ಲಿ ನಮೂದಿಸಿದ ಅಂಕಪಟ್ಟಿ./ಇತರ ದಾಖಲಾತಿಗಳಲ್ಲಿ ಯಾವುದೇ ವ್ಯತ್ಯಾಸ ಕಂಡುಬಂದಲ್ಲಿ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ, ಈ ನೇಮಕಾತಿ ಪ್ರಕಟಣೆಯನ್ನು ಯಾವುದೇ ಕಾರಣ ನೀಡದೆ ಯಾವುದೇ ಹಂತದಲ್ಲಿ ಹಿಂದಕ್ಕೆ ಪಡೆಯುವ / ರದ್ದುಪಡಿಸುವ ಅಧಿಕಾರವನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ ಹೊಂದಿರುತ್ತದೆ. ಅಭ್ಯರ್ಥಿಗಳು ಆಯ್ಕೆಯಾದ ನಂತರ ಸಲ್ಲಿಸಿರುವ ದಾಖಲಾತಿಗಳ ನೈಜತೆಯನ್ನು ಸಂಬಂಧಪಟ್ಟ ಸಂಸ್ಥೆ / ಪ್ರಾಧಿಕಾರ /ವಿಶ್ವವಿದ್ಯಾಲಯಗಳಿಂದ ದೃಢೀಕರಿಸಿಕೊಳ್ಳುವ ಹಕ್ಕನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘವು ಕಾಯ್ದಿರಿಸಿಕೊಂಡಿದೆ.
    - ಅನುಭವ ಅಗತ್ಯವಿರುವ ಹುದ್ದೆಗಳಿಗೆ ಅಗತ್ಯ ವಿದ್ಯಾರ್ಹತೆಯನ್ನು ಪಡೆದ ನಂತರ ಹೊಂದಿರುವ ಆಯಾ ಕ್ಷೇತ್ರ/ ಹುದ್ದೆಗೆ ಸಂಬಂಧಪಟ್ಟ ನಿರ್ದಿಷ್ಟ ಅನುಭವವನ್ನು ಮಾತ್ರ ಪರಿಗಣಿಸಲಾಗುವುದು. ಸೇವಾನುಭವ ದೃಢೀಕರಣ ಪತ್ರವನ್ನು ಸಲ್ಲಿಸುವವರು ಉದ್ಯೋಗದಾತರಿಂದ ಪಡೆದ ಸೇವಾ ದೃಢೀಕರಣ ಪತ್ರವನ್ನು ಕಡ್ಡಾಯವಾಗಿ ONLINE ನಲ್ಲಿ ಅಪ್‌ಲೋಡ್ ಮಾಡುವುದು ಹಾಗೂ ಮೂಲ ದಾಖಲಾತಿಗಳ ಪರಿಶೀಲನೆ ವೇಳೆ ಕಡ್ಡಾಯವಾಗಿ ಸಲ್ಲಿಸತಕ್ಕದ್ದು.

- ಅಭ್ಯರ್ಥಿಗಳು On-Line ಮೂಲಕ ಅರ್ಜಿ ಸಲ್ಲಿಸುವಾಗ ಕಡ್ಡಾಯವಾಗಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳ ಪ್ರತಿಯನ್ನು ಅಪ್‌ಲೋಡ್ ಮಾಡತಕ್ಕದ್ದು, ಮೂಲ ದಾಖಲಾತಿಗೆ ಹಾಜರಾಗುವ ಅರ್ಹ ಅಭ್ಯರ್ಥಿಗಳು ತಾವು ಸಲ್ಲಿಸಿದ ಎಲ್ಲಾ ಪ್ರಮಾಣ ಪತ್ರಗಳ ಮೂಲಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು.

**:ಮೀಸಲಾತಿ:**

- ಕಲ್ಯಾಣ ಕರ್ನಾಟಕ ಅಭ್ಯರ್ಥಿಗಳಿಗೆ (371ಜೆ)
- SC –A *if mentioned Roster Candidate not available continued roster will be considered.

**:: ವಯೋಮಿತಿ ::**

ನೇಮಕಾತಿ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ:13–12–2025 ನಿಗದಿಪಡಿಸಲಾಗಿದ್ದು, ಈ ದಿನಾಂಕಕ್ಕೆ ಅಭ್ಯರ್ಥಿಗಳ ಗರಿಷ್ಠ ವಯೋಮಿತಿ ಈ ಕೆಳಕಂಡಂತೆ ಇರತಕ್ಕದ್ದು.

| ಕ್ರ.ಸಂ | ಹುದ್ದೆ | ಗರಿಷ್ಠ ವಯೋಮಿತಿ |
|---|---|---|
| 1 | ಬ್ಲಾಕ್ ಎಪಿಡೆಮಿಯೋಲಾಜಿಸ್ಟ್ | 40 ವರ್ಷಗಳು |

**ಅಭ್ಯರ್ಥಿಯ ದಾಖಲಾತಿ ಪರಿಶೀಲನೆಯ ಸಮಯದಲ್ಲಿ ಕಡ್ಡಾಯವಾಗಿ ಹಾಜರುಪಡಿಸಬೇಕಾದ ಮೂಲ ಪ್ರಮಾಣ ಪತ್ರಗಳು: ಈ ಕೆಳಕಂಡಂತೆ ಇರುತ್ತವೆ.**

1. ಬ್ಲಾಕ್ ಎಪಿಡೆಮಿಯೋಲಾಜಿಸ್ಟ್ ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ/ಎಲ್ಲಾ ಸೆಮಿಸ್ಟರಗಳ/ವರ್ಷಗಳ ಪ್ರಮಾಣ ಪತ್ರಗಳು ಅಥವಾ ಅಂಕಪಟ್ಟಿಗಳು. (ಇಂಟರ್ನ್‌ಶಿಫ್ ಅಂಕಗಳನ್ನು ಪರಿಗಣಿಸುವುದಿಲ್ಲ.)
2. ಸಂಬಂಧಿಸಿದ ಪ್ರಾಧಿಕಾರದಲ್ಲಿ ನೊಂದಣಿ ಮಾಡಿಸಿದ ಪ್ರಮಾಣ ಪತ್ರಗಳನ್ನು ಹಾಜರುಪಡಿಸಬೇಕು.
3. ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ / ಜನ್ಮ ದಿನಾಂಕವನ್ನು ತೋರಿಸುವ ಸಂಚಿತ, ದಾಖಲೆಯ ಉದ್ಧೃತಭಾಗ (Extract of Cumulative Record) – ಜನನ ಪ್ರಮಾಣ ಪತ್ರ.
4. ಅನುಭವ/ನಿರಾಕ್ಷೇಪಣಾ ಪ್ರಮಾಣ ಪತ್ರ.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘವು ನಿಗದಿಪಡಿಸಿದ ಸ್ಥಳದಲ್ಲಿ ದಾಖಲಾತಿಗಳ ಪರಿಶೀಲನೆಗೆ ಅಭ್ಯರ್ಥಿಗಳು ಅವರ ಸ್ವಂತ ಖರ್ಚಿನಲ್ಲಿ ಹಾಜರಾಗುವುದು, ಅಭ್ಯರ್ಥಿಗಳು ಅಪ್‌ಲೋಡ್ ಮಾಡಿದ ದಾಖಲೆಗಳನ್ನು ಮಾತ್ರ ಪರಿಶೀಲನೆ ಮಾಡಲಾಗುವುದು. ದಾಖಲೆಗಳನ್ನು ಪರಿಶೀಲನೆ ಮಾಡುವ ದಿನಾಂಕವನ್ನು **www.koppal.nic.in** ತಿಳಿಸಲಾಗುವುದು. ಅಭ್ಯರ್ಥಿಗಳ ಆಯ್ಕೆ ಬಗ್ಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ನೇಮಕಾತಿ ಪ್ರಾಧಿಕಾರದ ನಿರ್ಣಯವೇ ಅಂತಿಮವಾಗಿರುತ್ತದೆ.

**ಪಾಸ್ ಪೋರ್ಟ್ ಭಾವಚಿತ್ರ ಅಳತೆ ಮತ್ತು ಸಹಿ**
**ಭಾವಚಿತ್ರ ಕಡತ ಗಾತ್ರ <100ಕೆ.ಬಿ**
**ಸಹಿ ಕಡತ ಗಾತ್ರ <50ಕೆ.ಬಿ**

ಒಂದು ವೇಳೆ ಅಭ್ಯರ್ಥಿಯು ತಮ್ಮ ಭಾವಚಿತ್ರ ಮತ್ತು ಸಹಿಯನ್ನು ಅಪ್‌ಲೋಡ್ ಮಾಡದಿದ್ದರೆ ಅವರ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ. ಅಭ್ಯರ್ಥಿಯು ಸಂಬಂಧಪಟ್ಟ ವಿದ್ಯಾರ್ಹತೆ, ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದ ನೊಂದಣಿ ಪ್ರಮಾಣ ಪತ್ರ, ಪ್ರಮಾಣ ಪತ್ರಗಳನ್ನು ಸ್ಕಾನ್ ಮಾಡಿ Upload ಮಾಡತಕ್ಕದ್ದು.

**ಅಭ್ಯರ್ಥಿಗಳು** On-Line: **ಮೂಲಕ ಅರ್ಜಿ ಸಲ್ಲಿಸುವಾಗ ಕಡ್ಡಾಯವಾಗಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳ ಪ್ರತಿಗಳನ್ನು ಅಪ್‌ಲೋಡ್ ಮಾಡತಕ್ಕದ್ದು, ಆದರೆ ಈ ಕೆಳಕಂಡ ಪ್ರಮಾಣ ಪತ್ರಗಳನ್ನು/ ದಾಖಲಾತಿಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಅಂದರೆ**

ದಿನಾಂಕ: 13-12-2025 ರೊಳಗೆ ಪಡೆದಿರಬೇಕು. ಇಲ್ಲವೇ ಸಿಂಧುವಾಗಿರಬೇಕು ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘವು ಪರಿಶೀಲನೆಗಾಗಿ ಹಾಜರುಪಡಿಸಲು ಸೂಚಿಸಿದಾಗ ಅರ್ಜಿಯಲ್ಲಿ ನಮೂದಿಸಿರುವ ಮೀಸಲಾತಿಯ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

**ಪ್ರಮುಖ ಸೂಚನೆಗಳು**

1. ಅಭ್ಯರ್ಥಿಗಳು Online ಅರ್ಜಿಗಳಲ್ಲಿ ನೀಡುವ ಮಾಹಿತಿಗಳ ಆಧಾರದ ಮೇಲೆ ಅವರುಗಳು ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರೆ ಎಂಬುದನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ ಪರಿಶೀಲಿಸಿ ಮೇಲು ನೋಟಕ್ಕೆ ಅರ್ಹರೆಂದು ಕಂಡುಬಂದ ಅಭ್ಯರ್ಥಿಗಳಿಗೆ ಮಾತ್ರ ಮೂಲ ದಾಖಲಾತಿ ಪರಿಶೀಲನೆಗೆ ಕರೆಯಲಾಗುವುದು. ಆದ್ದರಿಂದ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ ಪ್ರಮಾಣ ಪತ್ರ, ಅನುಭವ, ಮೀಸಲಾತಿ ಇತ್ಯಾದಿಗಳಿಗೆ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ.
2. ಅಭ್ಯರ್ಥಿಗಳು ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ, ಅನರ್ಹರೆಂದು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಯ ಅಭ್ಯರ್ಥಿತನವನ್ನು ರದ್ದುಪಡಿಸುವ ಹಕ್ಕು ಸಂಘಕ್ಕೆ ಇರುತ್ತದೆ.
3. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸುವ ಮೀಸಲಾತಿ, ಜನ್ಮ ದಿನಾಂಕ, ವಿದ್ಯಾರ್ಹತೆ, ಹಾಗೂ ಅನುಭವ, ಇತ್ಯಾದಿ ವಿವರಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಲಾಗುವುದು ಹಾಗೂ ಈ ಬಗ್ಗೆ ಆನಂತರದಲ್ಲಿ, ಬದಲಾವಣೆ ಕುರಿತಂತೆ ಸಲ್ಲಿಸುವ ಯಾವುದೇ ಕೋರಿಕೆ ಪತ್ರಗಳನ್ನು ಪುರಸ್ಕರಿಸಲಾಗುವುದಿಲ್ಲ.
4. ಅಭ್ಯರ್ಥಿಗಳು ಎಲ್ಲಾ ವರ್ಷಗಳ/ಸೆಮಿಸ್ಟರ್‌ಗಳ ಅಂಕಪಟ್ಟಿಗಳು, ನೊಂದಣಿ ಪ್ರಮಾಣ ಪತ್ರ, ಅನುಭವ, ಮೀಸಲಾತಿ, ವಯೋಮಿತಿ ಮುಂತಾದ ಅವಶ್ಯಕ ದಾಖಲೆಗಳ ಪ್ರತಿಗಳನ್ನು ಆನ್-ಲೈನ್‌ನಲ್ಲಿ ಅಪ್‌ಲೋಡ್ ಮಾಡುವುದು ಕಡ್ಡಾಯವಾಗಿರುತ್ತದೆ. ಅಸ್ಪಷ್ಟ, ಅಪೂರ್ಣ, ಭಾವಚಿತ್ರ ಇಲ್ಲದ ಮತ್ತು ಅಭ್ಯರ್ಥಿಯು ಸಹಿ ಮಾಡದೇ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
5. ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೊ ಪ್ರತಿಯನ್ನು ಕಡ್ಡಾಯವಾಗಿ ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ.
6. ಅಭ್ಯರ್ಥಿಗಳು ಅರ್ಜಿಗಳನ್ನು Online ಮೂಲಕ Upload ಮಾಡಿದ ನಂತರ ಸ್ಪಷ್ಟವಾಗಿ ಹಾಗೂ ನಿರ್ದಿಷ್ಟ ಗಾತ್ರದಲ್ಲಿ Upload ಮಾಡಿರುವ ಬಗ್ಗೆ ಖಚಿತ ಪಡಿಸಿಕೊಳ್ಳುವುದು.
7. ಅಭ್ಯರ್ಥಿಗಳು ಕೊನೆಯ ವೇಳೆಯಲ್ಲಿ ಅರ್ಜಿ ಸಲ್ಲಿಸುವಾಗ ಉಂಟಾಗುವ ವೆಬ್ ಜಾಲತಾಣದ ಸರ್ವರ್ ಸಮಸ್ಯೆಗಳಿಗೆ ಇಲಾಖೆ ಜವಾಬ್ದಾರವಾಗಿರುವುದಿಲ್ಲ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದವರೆಗೆ ಕಾಯದೆ ಬೇಗ ಅರ್ಜಿ ಸಲ್ಲಿಸುವುದು.

ವಿಶೇಷ ಸೂಚನೆ: ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮೊದಲು ಎಲ್ಲಾ ವಿವರಗಳನ್ನು ಓದಿ ಅರ್ಥೈಸಿಕೊಂಡು ಅನಂತರವೇ ತಮಗೆ ಅನ್ವಯವಾಗುವ ವಿವರಗಳನ್ನು ಭರ್ತಿ ಮಾಡತಕ್ಕದ್ದು, ಒಮ್ಮೆ ಅರ್ಜಿ ಸಲ್ಲಿಸಿದ ನಂತರ ಅರ್ಜಿಯಲ್ಲಿ ವಿವರಗಳನ್ನು ತಿದ್ದುಪಡಿ/ಸೇರ್ಪಡೆ ಮಾಡುವಂತೆ ನೀಡುವ ಯಾವುದೇ ಮನವಿಗಳನ್ನು ತಿರಸ್ಕರಿಸಲಾಗುವುದು. ಅಭ್ಯರ್ಥಿಗಳು ವಯೋಮಿತಿ, ವಿದ್ಯಾರ್ಹತೆಗೆ ಸಂಬಂಧಿಸಿದ ಪ್ರಮಾಣ ಪತ್ರಗಳನ್ನು ಹಾಗೂ ಅರ್ಜಿಯಲ್ಲಿ ಕೋರಿರುವ ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಕಡ್ಡಾಯವಾಗಿ ಪಡೆದಿಟ್ಟುಕೊಂಡು ಅರ್ಜಿ ಸಲ್ಲಿಸುವಾಗ ಸ್ಪಷ್ಟವಾದ ದಾಖಲೆಗಳನ್ನು ಅಪ್‌ಲೋಡ್ ಮಾಡತಕ್ಕದ್ದು. ಅಭ್ಯರ್ಥಿಗಳು ಅಪ್‌ಲೋಡ್ ಮಾಡುವ ದಾಖಲೆಗಳನ್ನು ಮಾತ್ರ ಪರಿಶೀಲನೆ ಮಾಡಲಾಗುವುದು. ತದ ನಂತರದಲ್ಲಿ ಮನವಿ ಮುಖಾಂತರ ಯಾವುದೇ ದಾಖಲೆಗಳನ್ನು ಸಲ್ಲಿಸಿದ್ದಲ್ಲಿ ಪರಿಗಣಿಸಲಾಗುವುದಿಲ್ಲ.

ಉಪಾಧ್ಯಕ್ಷರು
ಜಿಲ್ಲಾ ಆರೋಗ್ಯ ಮತ್ತು ಕುಟುಂಬ
ಕಲ್ಯಾಣ ಸಂಘ ಕೊಪ್ಪಳ